215

ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2079

2 ಸದಸ್ಯರ ಹೆಸರು : ಶ್ರೀ ಸಲಿಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

3 ಉತ್ತರಿಸುವ ದಿನಾಂಕ : 17-03-2022

4 ಉತ್ತರಿಸುವವರು : ಮುಖ್ಯಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಅಮೃತ ನಗರೋತ್ಥಾನ ಯೋಜನೆಯಡಿ ಬೆಂಗಳೂರು ನಗರದಲ್ಲಿನ ವಿಧಾನಸಭಾ ಕ್ಷೇತ್ರಗಳಿಗೆ ಬಿಡುಗಡೆ ಮಾಡಲಾದ ಅನುದಾನ ಎಷ್ಟು; | ದಿನಾಂಕ: 15-08-2021 ರಂದು ಭಾರತ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಆಚರಣೆ ಸಂದರ್ಭದಲ್ಲಿ ಮಾಡಿರುವ ಭಾಷಣದಲ್ಲಿ ಬಿಬಿಎಂಪಿ ವ್ಯಾಪ್ತಿಯ ಮುಖ್ಯ ಮೂಲಭೂತ ಸೌಕರ್ಯ ಕಾಮಗಾರಿಗಳಿಗಾಗಿ "ಅಮೃತ ನಗರೋತ್ಥಾನ ಯೋಜನೆ" ಅಡಿಯಲ್ಲಿ ರೂ.6000.00 ಕೋಟಿಗಳ ಅನುದಾನವನ್ನು ನಿಗಧಿಪಡಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ.<br><br>ಮುಂದುವರೆದು, "ಅಮೃತ ನಗರೋತ್ಥಾನ ಯೋಜನೆ" ಅಡಿಯಲ್ಲಿ ನಿಗಧಿಪಡಿಸಿರುವ ರೂ.6000.00 ಕೋಟಿಗಳ ಪೈಕಿ, 28 ವಿಧಾನಸಭಾ ಕ್ಷೇತ್ರಗಳಿಗೆ ರೂ.3661.00 ಕೋಟಿಗಳ ಅನುದಾನವನ್ನು ಹಂಚಿಕೆ ಮಾಡಲಾಗಿರುತ್ತದೆ. |
| ಆ | ಈ ಯೋಜನೆಯಡಿ ವಿಧಾನಸಭಾ ಕ್ಷೇತ್ರವಾರು ಬಿಡುಗಡೆ ಮಾಡಿರುವ ಅನುದಾನದಲ್ಲಿ ತಾರತಮ್ಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ / ರೂಪಿಸುವ ಸಂದರ್ಭದಲ್ಲಿ ಆಯಾ ವಿಧಾನಸಭಾ ಕ್ಷೇತ್ರಗಳ ಅಥವಾ ಪಾಲಿಕೆಯ ಜನಪ್ರತಿನಿಧಿಗಳಿಂದ, ಸಾರ್ವಜನಿಕರು, ಸಂಘ ಸಂಸ್ಥೆಗಳು ಮತ್ತು ಇತರರಿಂದ ಬರುವ ಪತ್ರ / ಮನವಿ / ಕೋರಿಕೆಗಳು ಹಾಗೂ ಹಿಂದಿನ ವರ್ಷಗಳಲ್ಲಿ ಉಂಟಾದ / ಎದುರಿಸಿದ ಪ್ರತಿಕೂಲತೆಗಳನ್ವಯ ಆದ್ಯತೆಯ ಮೇಲೆ ಅನುದಾನವನ್ನು ಒದಗಿಸಲಾಗುತ್ತಿದೆ.<br><br>ಪ್ರಸ್ತುತ ಪಾಲಿಕೆ ವತಿಯಿಂದ ಎಲ್ಲಾ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮೂಲ ಸೌಕರ್ಯಗಳನ್ನು ಒದಗಿಸಲು ಆಯಾ ಆರ್ಥಿಕ ಸಾಲಿನಲ್ಲಿ ಲಭ್ಯವಾಗುವ ಆರ್ಥಿಕ ಸಂಪನ್ಮೂಲದ ಮಿತಿಯೊಳಗೆ ಕಾರ್ಯಕ್ರಮಗಳನ್ನು ರೂಪಿಸಿ, ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ | ಬಂದಿದ್ದಲ್ಲಿ ಈ ತಾರತಮ್ಯ ಮಾಡಲು ಕಾರಣವೇನು? ಮತ್ತು ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

**ಸಂಖ್ಯೆ: ನಅಇ 125 ಎಂಎನ್‌ವೈ 2022 (ಇ)**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ